**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 50 |
| ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ, (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 02.03.2020 |
| ಉತ್ತರಿಸುವ ಸಚಿವರು | ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು. |
| **ಪ್ರಶ್ನೆಗಳು** | **ಉತ್ತರಗಳು** |
| 2015-16ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಐ.ಟಿ ಪಾರ್ಕ್ ಮತ್ತು ಇನ್‌ಕ್ಯೂಬೇಷನ್ ಸೆಂಟರ್‌ಗಾಗಿ ರಾಜ್ಯ ಆಯವ್ಯಯದಲ್ಲಿ ಘೋಷಣೆಯಾಗಿ ತಾಂತ್ರಿಕ ಕಾರಣಗಳಿಂದಾಗಿ ಈ ಯೋಜನೆ ಕೈತಪ್ಪಿರುವುದರಿಂದ ಈ ಯೋಜನೆಯನ್ನು ಪ್ರಾರಂಭಿಸುವ ಚಿಂತನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು; ಇಲ್ಲದಿದ್ದಲ್ಲಿ, ಇದಕ್ಕೆ ಕಾರಣವೇನು? (ವಿವರವಾದ ಮಾಹಿತಿ ನೀಡುವುದು) | ಬೀದರ್ ಜಿಲ್ಲೆಯಲ್ಲಿ ಐ.ಟಿ ಪಾರ್ಕ್ ಮತ್ತು ಇನ್ಕ್ಯುಬೇಟರ್‌ಗಳನ್ನು ಸ್ಥಾಪಿಸಲು ಪೂರ್ವಭಾವಿ ಸಿದ್ಧತೆ ಮಾಡಲಾಗುವುದು ಎಂದು 2016-17ನೇ ಸಾಲಿನ ರಾಜ್ಯ ಆಯವ್ಯಯದಲ್ಲಿ ಘೋಷಣೆಯಾಗಿರುತ್ತದೆ.<br>ಬೀದರ್‌ನಲ್ಲಿ ಐಟಿ ಕಂಪನಿಗಳು/ ನವೋದ್ಯಮಗಳಿಂದ ಬೇಡಿಕೆಯಿರುವುದಿಲ್ಲ. ಆದಾಗ್ಯೂ, ಬೀದರ್‌ನಲ್ಲಿ ಸ್ಟಾರ್ಟ್‌ಅಪ್‌ಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಯುವ ವಿದ್ಯಾರ್ಥಿಗಳ ಹೊಸ ಪರಿಕಲ್ಪನೆಗಳನ್ನು ಪರಿಪೋಷಿಸಲು ಉತ್ತೇಜಿಸುವ ಸಲುವಾಗಿ ಸರ್ಕಾರವು ಗುರುನಾನಕ್ ದೇವ್ ಇಂಜಿನಿಯರಿಂಗ್ ಕಾಲೇಜಿಗೆ ನ್ಯೂ ಏಜ್ ಇನ್ಕ್ಯುಬೇಶನ್ ನೆಟ್‌ವರ್ಕ್ ಸೆಂಟರ್ (NAIN) ಗಾಗಿ ಮಂಜೂರಾತಿ ನೀಡಿ, ರಾಜ್ಯ ಸರ್ಕಾರದ ಅನುದಾನವನ್ನು ಸಹ ಒದಗಿಸಲಾಗಿದೆ. |

ಸಂಖ್ಯೆ: ಐಟಿಬಿಟಿ 04 ಎಲ್ ಸಿ ಎಂ 2020

(ಡಾ॥ ಅಶ್ವಥ್ ನಾರಾಯಣ ಸಿ.ಎನ್)
ಉಪಮುಖ್ಯಮಂತ್ರಿಗಳು ಹಾಗೂ
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ
ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.